# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 23.09.2011**

## ***ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡಿದ್ದ ಮಾಲೀಕರ ಮನೆ ಎದುರುಗಡೆ ತಮಟೆ ಬಾರಿಸುವ ಕಾರ್ಯಕ್ರಮ***

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ಆಸ್ತಿ ತೆರಿಗೆ ಬಾಕಿ ಇರುವ ತೆರಿಗೆದಾರರಿಗೆ ನೋಟಿಸ್‌ಗಳನ್ನು ಜಾರಿ ಮಾಡಿ ದಂಡ ಸಮೇತ ವಸೂಲಿ ಮಾಡಲು ಕಾರ್ಯಕ್ರಮಗಳನ್ನು ರೂಪಿಸಿ ಅಗತ್ಯವಿದ್ದಲ್ಲಿ ಜಪ್ತಿ ವಾರಂಟ್‌ಗಳನ್ನು ಜಾರಿ ಮಾಡಿ ತೆರಿಗೆ ವಸೂಲಿ ಮಾಡಲು ವಲಯ ಜಂಟಿ ಆಯುಕ್ತರು ಹಾಗೂ ಉಪ ಆಯುಕ್ತರುಗಳಿಗೆ ಆದೇಶಿಸಿರುತ್ತಾರೆ.

ಇಂದು ತಮಟೆ ಹೊಡೆಯುವ ಕಾರ್ಯಕ್ರಮವನ್ನು ಮುಂದುವರೆಸಿ, ವಾರ್ಡ್ ನಂ.171 ಗುರಪ್ಪನಪಾಳ್ಯ, ಬನ್ನೇರುಘಟ್ಟ ರಸ್ತೆ, ಸ್ವತ್ತಿನ ಸಂಖ್ಯೆ: 12, 12/1 ಮತ್ತು 12/2 ಈ ಸ್ವತ್ತಿನ ಕಂದಾಯವು 2008-09ರ 2ನೇ ಕಂತು, 2009-10 ಮತ್ತು 2010-11ರ ಸಾಲಿನ ಕಂದಾಯವನ್ನು ಬಾಕಿ ಉಳಿಸಿಕೊಂಡಿರುವ ಸ್ವತ್ತಿನ ಖಾತೆದಾರರಾದ ಮೆ॥ ಸುಬ್ರಹ್ಮಣ್ಯ ಕನ್‌ಸ್ಟ್ರಕ್ಷನ್ಸ್ ಡೆವಲಪ್‌ಮೆಂಟ್ ಪ್ರೈ. ಲಿಮಿಟೆಡ್ ರವರಿಗೆ ಕಂದಾಯ ಅಧಿಕಾರಿ (ಜಯನಗರ) ಹಾಗೂ ಸಹಾಯಕ ಕಂದಾಯ ಅಧಿಕಾರಿ (ಜಯನಗರ) ರವರು ನೋಟಿಸ್ ಮತ್ತು ನೆನಪಿನ ಪತ್ರ ಜಾರಿ ಮಾಡಿದ್ದರೂ ಸಹ ಸುಮಾರು ರೂ.11.14 ಕೋಟಿಗಳಷ್ಟು ಕಂದಾಯವನ್ನು ಪಾವತಿಸಿದೇ ಬಾಕಿ ಉಳಿಸಿಕೊಂಡಿದ್ದರಿಂದ ಜಂಟಿ ಆಯುಕ್ತರು (ದಕ್ಷಿಣ) ರವರ ಸೂಚನೆಯ ಮೇರೆಗೆ ದಿನಾಂಕ: 23.09.2011 ರಂದು ಕಂದಾಯ ಅಧಿಕಾರಿ (ಜಯನಗರ) ಹಾಗೂ ಸಹಾಯಕ ಕಂದಾಯ ಅಧಿಕಾರಿ (ಜಯನಗರ) ರವರ ನೇತೃತ್ವದಲ್ಲಿ ಪಾಲಿಕೆ ಸಿಬ್ಬಂದಿಯ ಸಹಯೋಗದೊಂದಿಗೆ ಕಟ್ಟಡದ ಎದುರುಗಡೆ ತಮಟೆ ಹೊಡೆಯುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಸ್ವತ್ತಿನ ಖಾತೆದಾರರಾದ ಮೆ॥ ಸುಬ್ರಹ್ಮಣ್ಯ ಕನ್‌ಸ್ಟ್ರಕ್ಷನ್ಸ್ ಡೆವಲಪ್‌ಮೆಂಟ್ ಪ್ರೈ. ಲಿಮಿಟೆಡ್ ರವರು ಇಂದು ಮುಂಗಡವಾಗಿ ರೂ.1.00 ಕೋಟಿ ಚೆಕ್‌ನ್ನು ಕಂದಾಯ ಅಧಿಕಾರಿ (ಜಯನಗರ) ರವರಿಗೆ ನೀಡಿ, ಉಳಿಕೆ ಕಂದಾಯವನ್ನು 4 ತಿಂಗಳ ಒಳಗೆ ಪಾವತಿಸುವುದಾಗಿ ಒಪ್ಪಿಕೊಂಡು ಮುಚ್ಚಳಿಕೆ ಪತ್ರವನ್ನು ನೀಡುವುದಾಗಿ ತಿಳಿಸಿದರು.

ಬಾಕಿ ಉಳಿಸಿಕೊಂಡಿರುವ ಆಸ್ತಿ ತೆರಿಗೆಯನ್ನು ಪಾವತಿಸಲು ಆಸ್ತಿ ಮಾಲೀಕರಿಗೆ ಸಾಕಷ್ಟು ಕಾಲಾವಕಾಶ ನೀಡಲಾಗಿದೆ. ಆದರೂ ಕೆಲವರು ತೆರಿಗೆ ಪಾವತಿಸದೇ ಬಾಕಿ ಉಳಿಸಿಕೊಂಡಿದ್ದಾರೆ. ಅಂತಹವರ ವಿರುದ್ಧ ಜಪ್ತಿ ವಾರಂಟ್ ಜಾರಿ ಮಾಡುವುದರ ಜೊತೆಗೆ ಅವರ ಮನೆ ಎದುರು ತಮಟೆ ಹೊಡೆಯುವ ಕಾರ್ಯ ಮುಂದುವರೆಸಲಾಗುವುದೆಂದು ಆಯುಕ್ತರು ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡಿದ್ದ ಮಾಲೀಕರಿಗೆ ಎಚ್ಚರಿಕೆ ನೀಡಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**